ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ಪ್ರಾಥಮಿಕ ಹಂತದಲ್ಲಿ ಇಂಗ್ಲೀಷ್ ಮಾಧ್ಯಮ ಶಾಲೆಯ ಬೋಧನೆ ಕುರಿತು

ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು)

412 (539) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರಾಥಮಿಕ ಹಂತದಲ್ಲಿ ಇಂಗ್ಲೀಷ್ ಮಾಧ್ಯಮ ಶಾಲೆಯ ಬೋಧನೆಗೆ ಎಷ್ಟು ಶಾಲೆಗಳನ್ನು ಪ್ರಾರಂಭಿಸಲಾಗಿದೆ ; ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಆ) ಇಂಗ್ಲೀಷ್ ಮಾಧ್ಯಮ ಶಾಲೆಗಳಿಗೆ ಶಿಕ್ಷಕರನ್ನು ನೇಮಿಸಲಾಗಿದೆಯೇ; ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರಿಗೆ ತರಬೇತಿ ನೀಡಲಾಗಿದೆಯೇ ;

(ಇ) 2020-2021 ನೇ ಸಾಲಿನಲ್ಲಿ ಎಷ್ಟು ಇಂಗ್ಲೀಷ್ ಮಾಧ್ಯಮ ಶಾಲೆಗಳನ್ನು ಪ್ರಾರಂಭಿಸಲು ಸರ್ಕಾರದ ಮುಂದೆ ಪ್ರಸ್ತಾವನೆಗಳಿವೆ ; (ವಿವರ ನೀಡುವುದು)

(ಈ) ಕನ್ನಡ ಮಾಧ್ಯಮ ಶಾಲೆಗಳನ್ನು ಇಂಗ್ಲೀಷ್ ಮಾಧ್ಯಮ ಶಾಲೆಗಳನ್ನಾಗಿ ಪರಿವರ್ತಿಸಲು ಸರ್ಕಾರ ಯೋಚಿಸುತ್ತಿದೆಯೇ ; ಇದ್ದಲ್ಲಿ, ಸರ್ಕಾರದ ಯೋಜನೆಗಳಾವುವು ? (ವಿವರ ನೀಡುವುದು)